ದಿನಾಂಕ 07.07.2023 ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ದೂರಿನ ಯಥಾ ನಕಲನ್ನು ನಿಪಿ-1, ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ನಿಪಿ-2, ಶವ ತನಿಖಾ ವರದಿಯ ಯಥಾ ನಕಲನ್ನು ನಿಪಿ-3, ಕೃತ್ಯ ಸ್ಥಳದ ಹಾಗೂ ಅಮಾನತು ಪಂಚನಾಮೆಯ ಯಥಾ ನಕಲನ್ನು ನಿಪಿ-4, ಕೃತ್ಯ ಸ್ಥಳದ ಕಚ್ಚಾ ನಕ್ಷೆಯ ಯಥಾ ನಕಲನ್ನು ನಿಪಿ-5, ಪಿ.ಎಂ ವರದಿಯ ಯಥಾ ನಕಲನ್ನು ನಿಪಿ-6, ಐ.ಎಂ.ವಿ ವರದಿಯ ಯಥಾ ನಕಲನ್ನು ನಿಪಿ-7, ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ನಿಪಿ-8, ನಮ್ಮ ಕುಟುಂಬದ ಪಡಿತರ ಚೀಟಿಯ ನೋಟರೈಸ್ಡ್ ಪ್ರತಿಯನ್ನು ನಿಪಿ-9, ನನ್ನ ಆಧಾರ್ ಕಾರ್ಡಿನ ನೋಟರೈಸ್ಡ್ ಪ್ರತಿಯನ್ನು ನಿಪಿ-10 ಎಂದು ಗುರುತಿಸಲಾಯಿತು. ಅರ್ಜಿಯನ್ನು ಪುರಸ್ಕರಿಸುವಂತೆ ಕೋರುತ್ತೇನೆ.

ನಿಪಿ-9 ಹಾಗೂ ನಿಪಿ-10 ರ ಮೂಲ ದಾಖಲೆಗಳನ್ನು ಸಾಕ್ಷಿದಾರರು ಹಾಜರುಪಡಿಸಿದ್ದು, ಅವುಗಳನ್ನು ಮೂಲ ದಾಖಲೆಗಳೊಂದಿಗೆ ತಾಳೆ ನೋಡಿ ಮೂಲ ದಾಖಲೆಗಳು ಸಾಕ್ಷಿದಾರರ ದೈನಂದಿಕ ಕಾರ್ಯಗಳಿಗೆ ಅವಶ್ಯಕತೆ ಇದೆ ಎಂದು ಹೇಳಿದ ಕಾರಣ ಮೂಲ ದಾಖಲೆಗಳನ್ನು

ಅವಶ್ಯಕತೆ ಇದ್ದ ಪಕ್ಷದಲ್ಲಿ ಹಾಜರುಪಡಿಸುವ ಷರತ್ತಿಗೊಳಪಡಿಸಿ ಸಾಕ್ಷಿದಾರರಿಗೆ ಹಿಂದಿರುಗಿಸಲಾಯಿತು.

ಪಾಟೀ ಸವಾಲುಃ-

1 ನೇ ಎದುರುದಾರರು ಏಕಪಕ್ಷೀಯವಾದ ಕಾರಣ ಅವರ ಪರ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

2 ನೇ ಎದುರುದಾರರ ಪರ ವಕೀಲರ ಮನವಿಯ ಮೇರೆಗೆ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಸರಸ್ವತಿ ಕೆ.ಎನ್.)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯ ಮಂಡಳಿಯ
ಪೀಠಾಧಿಕಾರಿಗಳು.